ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ಕಲ್ಯಾಣ ಕರ್ನಾಟಕದ ಪ್ರಮುಖ ಬೆಳೆಗಳ ಬೆಳೆಗಳನ್ನು ಖರೀದಿಸುವ ಕುರಿತು

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

244 (213) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕದ ಪ್ರಮುಖ ಬೆಳೆಗಳಾದ ತೊಗರಿ, ಉದ್ದು, ಹೆಸರು ಮುಂತಾದ ಬೆಳೆಗಳನ್ನು ರೈತರಿಂದ ಖರೀದಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಎಷ್ಟು ಕ್ವಿಂಟಾಲ್ ಬೆಳೆಯನ್ನು ರೈತರಿಂದ ಖರೀದಿಸಲಾಗಿದೆ; (ವಿವರ ನೀಡುವುದು)

(ಆ) ರೈತರಿಂದ ಖರೀದಿಸಿದ ಬೆಳೆಗಳಿಗೆ ಸೂಕ್ತ ಬೆಂಬಲ ಬೆಲೆ ನೀಡಲಾಗುತ್ತಿದೆಯೇ;

(ಇ) ಹಿಂದೆ ರೈತರು ಬೆಳೆದ ಬೆಳೆಯನ್ನು 20 ಕ್ವಿಂಟಾಲ್ ಖರೀದಿಸಲಾಗುತ್ತಿದ್ದು, ಸದ್ಯ 10 ಕ್ವಿಂಟಾಲ್ ಬೆಳೆಯನ್ನು ರೈತರಿಂದ ಖರೀದಿಸಿರುವುದರಿಂದ ರೈತರಿಗೆ ಸಮಸ್ಯೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ಯಾವ ಕ್ರಮ ಕೈಗೊಂಡಿದೆ?